ಫಲ್ಲವಿ

ತಲ್ಲಣಿಸದಿರು ಕಣ್ಡ್ಯ ತಾಳು ಮನವೆ
ಎಲ್ಲರನು ಸಲಹುವನು ಇದಕೆ ಸಂಶಯವಿಲ್ಲ

ಛರಣಮ್

ಬೆಟ್ಟದಾ ತುದಿಯಲ್ಲಿ ಹುಟ್ಟಿರುವ ವೃಕ್ಷಕ್ಕೆ
ಕಟ್ಟೆಯನು ಕಟ್ಟಿ ನೀರೆರದವರು ಯಾರೊ
ಹುಟ್ಟಿಸಿದ ಸ್ವಾಮಿ ತಾ ಹೊಣೆಗಾರನಾಗಿರಲು
ಘಟ್ಯಾಗಿ ಸಲಹುವನು ಇದಕೆ ಸಂಶಯವಿಲ್ಲ |೧|

ಅಡವಿಯೊಳಗಾಡುವಾ ಮೃಗಪಕ್ಷಿಗಳಿಗೆಲ್ಲ
ಅಡಿಗಡಿಗೆ ಆಹಾರವಿತ್ತವರು ಯಾರೊ
ಪಡೆದ ಜನನಿಯ ತೆರದಿ ಸ್ವಾಮಿ ಹೊಣೆಗೀಡಾಗಿ
ಬಿಡದೆ ರಕ್ಷಿಪನಿದಕೆ ಸಂದೆಹ ಬೆಡಾ |೨|

ಕಲ್ಲೊಳಗೆ ಹುಟ್ಟಿರುವ ಕ್ರಿಮಿಕೀಟಗಳಿಗೆಲ್ಲ
ಅಲ್ಲಲ್ಲಿ ಆಹಾರ ಇಟ್ಟವರು ಯಾರೊ
ಫುಲ್ಲಲೊಚನ ಕಾಗಿನೆಲೆಯಾದಿಕೇಶವನು
ಎಲ್ಲರನು ಸಲಹುವನು ಇದಕೆ ಸಂಶಯವಿಲ್ಲ |೩|